15-16
85

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಶಿವಮಯಂ ಫೌಂಡೇಷನ್ (ಚಾರಿಟಬಲ್ ಟ್ರಸ್ಟ್) ಕಂಪನಿಗೆ ಉಡುಪಿ ಜಿಲ್ಲೆ ಮತ್ತು ತಾಲ್ಲೂಕಿನ ಪೆರಡೂರ್ ಗ್ರಾಮದಲ್ಲಿ 1.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

**ಓದಲಾಗಿದೆ:** 1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KRED/08/SF-1 MW/ Charitable Trust/2012 /S-1075 .

2 ದಿನಾಂಕ: 27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

ಪ್ರಸ್ತಾವನೆ :-

ಮೆ: ಶಿವಮಯಂ ಫೌಂಡೇಷನ್ (ಚಾರಿಟಬಲ್ ಟ್ರಸ್ಟ್) ಕಂಪನಿಯವರು ಉಡುಪಿ ಜಿಲ್ಲೆ ಮತ್ತು ತಾಲ್ಲೂಕಿನ ಪೆರಡೂರ್ ಗ್ರಾಮದಲ್ಲಿ 1.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧವಾಗಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕ್ರೆಡಲ್‌ಗೆ ಸಲ್ಲಿಸಿರುತ್ತಾರೆ. ಮೆ: ಶಿವಮಯಂ ಫೌಂಡೇಷನ್ (ಚಾರಿಟಬಲ್ ಟ್ರಸ್ಟ್) ಕಂಪನಿಗೆ ಉಡುಪಿ ಜಿಲ್ಲೆ ಮತ್ತು ತಾಲ್ಲೂಕಿನ ಪೆರಡೂರ್ ಗ್ರಾಮದಲ್ಲಿ 1.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಮಂಜೂರಾತಿ ಬಗ್ಗೆ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು, ಈ ಪ್ರಸ್ತಾವನೆಯನ್ನು ಸಮಿತಿಯು ಕೂಲಂಕಷವಾಗಿ ಪರಿಶೀಲಿಸಿ, ಮೆ: ಶಿವಮಯಂ ಫೌಂಡೇಷನ್ (ಚಾರಿಟಬಲ್ ಟ್ರಸ್ಟ್) ಕಂಪನಿಗೆ ಉಡುಪಿ ಜಿಲ್ಲೆ ಮತ್ತು ತಾಲ್ಲೂಕಿನ ಪೆರಡೂರ್ ಗ್ರಾಮದಲ್ಲಿ 1.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 64 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ :24.03.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, ಮೆ: ಶಿವಮಯಂ ಫೌಂಡೇಷನ್ (ಚಾರಿಟಬಲ್ ಟ್ರಸ್ಟ್) ಕಂಪನಿಗೆ ಉಡುಪಿ ಜಿಲ್ಲೆ ಮತ್ತು ತಾಲ್ಲೂಕಿನ ಪೆರಡೂರ್ ಗ್ರಾಮದಲ್ಲಿ 1.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.

2

84



Geographical area description for 1 MW capacity wind power project

| Sl. No. | Toposheet No. | Proposed Enhaced capacity in MW | Near by villages of the proposed area and district | Geographical Area description of the Project |
|---|---|---|---|---|
| 1 | 48K/15/NE (1 :25000 scale map) | 1 MW (2 Nos x 500 kW) | Perdoor Village, Udupi Taluk & Districts. | The Proposed area is covered by temple, water body, partially with fairly dense mixed jungle and also crossing of power line & road. It is covered by open scrub with cashew plantations. The identified area is covered in the following Geographical co-ordinates as: Latitude : 13°23'7" - 13°23'53" N, Longitude: 74°53'28" -74°54'35" E **peaks:** 52, 57 and 93 m Amsl. |
| | Total | 40 MW | | |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಯ ಪ್ರಾರಂಭದಿಂದ ಮುಕ್ತಾಯ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ, ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಂಡಲ್ಲಿ ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು, ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಬಗ್ಗೆ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
7. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009 ರನ್ವಯ ಅರ್ಹ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.
8. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

--3)